# OCTOBER 8, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ರಾಜ್ಯದಲ್ಲಿ ನಡೆಯುತ್ತಿರುವ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆ: ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರದ ಸೂಚನೆ.**

- **'ಜಲ ಸಂಚಯ, ಜನ ಭಾಗಿದಾರಿ' ಅಭಿಯಾನದಡಿ, ಜಲ ಸಂರಕ್ಷಣೆಯಲ್ಲಿ ತೊಡಗಿಸಿಕೊಂಡ ರಾಜ್ಯದ 7 ಜಿಲ್ಲೆಗಳು ರಾಷ್ಟ್ರೀಯ ಪ್ರಶಸ್ತಿಗೆ ಭಾಜನ.**

- **ಪಿಎಂ ಸೂರ್ಯಘರ್ ಯೋಜನೆಯಡಿ 5.79 ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಸಾಲ ಸೌಲಭ್ಯ : ಕೇಂದ್ರ ಸಚಿವ ಪ್ರಲ್ಹಾದ ಜೋಶಿ**

- **ರಾಜ್ಯದ ವಿವಿಧೆಡೆ ನಿನ್ನೆ ಸಡಗರ, ಸಂಭ್ರಮದಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ.**

**ಈಗ ವಾರ್ತೆಗಳ ವಿವರ**

***********

**ರಾಜ್ಯದಲ್ಲಿ ನಡೆಯುತ್ತಿರುವ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಸರ್ಕಾರ ಸೂಚಿಸಿದೆ. ಇನ್ನು ಹಲವು ಜಿಲ್ಲೆಗಳಲ್ಲಿ ಸಮೀಕ್ಷೆ ಪೂರ್ಣಗೊಳ್ಳದ ಹಿನ್ನೆಲೆ, ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಇದೇ 18 ರವರೆಗೆ ರಜೆ ವಿಸ್ತರಿಸಲಾಗಿದ್ದು, ಅಷ್ಟರೊಳಗೆ ಸಮೀಕ್ಷೆ ಕಾರ್ಯ ಮುಗಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.ಸೆಪ್ಟೆಂಬರ್ 22 ರಿಂದ ಸಮೀಕ್ಷಾ ಕಾರ್ಯ ಆರಂಭವಾಗಿದ್ದು, ನಿನ್ನೆ ಪೂರ್ಣಗೊಳ್ಳಬೇಕಿತ್ತು. ಹಲವು ಜಿಲ್ಲೆಗಳಲ್ಲಿ ಸಮೀಕ್ಷಾ ಕಾರ್ಯ ಅಪೂರ್ಣವಾಗಿರುವದರಿಂದ ಶಿಕ್ಷಕರ ಸಂಘದ ಮನವಿಯ ಮೇರೆಗೆ ರಜೆ ಅವಧಿ ವಿಸ್ತರಿಸಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಶೇಕಡ 97 ರಷ್ಟ ಸಮೀಕ್ಷಾ ಕಾರ್ಯ ಪೂರ್ಣಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 67, ಉಡುಪಿಯಲ್ಲಿ 63 ರಷ್ಟ ಸಮೀಕ್ಷೆ ನಡೆದಿದೆ. ಒಂದು ಲಕ್ಷದ 20 ಸಾವಿರ ಶಿಕ್ಷಕರು ಹಾಗೂ ಇತರೆ ಇಲಾಖೆಗಳ 40 ಸಾವಿರ ಸಿಬ್ಬಂದಿ ಗಣತಿ ಕಾರ್ಯದಲ್ಲಿ ತೊಡಗಿದ್ದು, ಹೆಚ್ಚುವರಿಯಾಗಿ 10 ದಿನಗಳ ಕಾಲ ಕಾಲಾವಕಾಶ ನೀಡಿರುವುದರಿಂದ 8 ಕೆಲಸದ ದಿನ ಸಿಗಲಿದೆ.**

ದ್ವಿತೀಯ ಪಿಯುಸಿ ಮಧ್ಯಂತರ ಪರೀಕ್ಷಾ ಕಾರ್ಯದಲ್ಲಿ ತೊಡಗಿಕೊಂಡಿರುವ ಉಪನ್ಯಾಸಕರಿಗೆ ಗಣತಿ ಕಾರ್ಯದಿಂದ ವಿನಾಯತಿ ನೀಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

*******

ಜಲ ಸಂರಕ್ಷಣೆಯಲ್ಲಿ ತೊಡಗಿಸಿಕೊಂಡ ರಾಜ್ಯದ 7 ಜಿಲ್ಲೆಗಳು 'ಜಲ ಸಂಚಯ, ಜನ ಭಾಗಿದಾರಿ' ಅಭಿಯಾನದಡಿ ರಾಷ್ಟ್ರೀಯ ಪ್ರಶಸ್ತಿಗೆ ಭಾಜನವಾಗಿವೆ. ಸಾಮಾಜಿಕ ಮಾಧ್ಯಮ ಫೇಸ್‌ಬುಕ ಮೂಲಕ ಈ ಮಾಹಿತಿ ಹಂಚಿಕೊಂಡಿರುವ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ, ಗದಗ, ವಿಜಯಪುರ, ಬೀದರ, ಕೋಲಾರ, ತುಮಕೂರು, ಮಂಡ್ಯ, ಮತ್ತು ಚಿತ್ರದುರ್ಗ ಜಿಲ್ಲೆಗಳು ಪ್ರಶಸ್ತಿಗೆ ಭಾಜನವಾಗಿವೆ ಎಂದು ತಿಳಿಸಿದ್ದಾರೆ. ಅಂತರ್ಜಲ ಹೆಚ್ಚಿಸುವುದು, ಮಳೆ ನೀರು ಸಂರಕ್ಷಣೆ, ಕೊಳವೆಬಾವಿ, ಸಮಗ್ರ ಕೆರೆ–ಕಟ್ಟೆ ಅಭಿವೃದ್ಧಿ, ಕಲ್ಯಾಣಿ ಜೀರ್ಣೋದ್ಧಾರ, ಚೆಕ್ ಡ್ಯಾಮ್ ನಿರ್ಮಾಣ ಸೇರಿದಂತೆ ಜಲಸಂರಕ್ಷಣೆಯ ಎಲ್ಲ ಮಾರ್ಗಗಳನ್ನು ಅಭಿವೃದ್ಧಿಪಡಿಸುವುದು ಈ ಅಭಿಯಾನದ ಉದ್ದೇಶವಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

*******

ರಾಜ್ಯದಲ್ಲಿ ಕಡ್ಡಾಯ ವೈದ್ಯಕೀಯ ಸೇವೆ ಅನುಷ್ಠಾನಗೊಳಿಸಲಾಗಿದ್ದು, 1850 ಎಂ.ಬಿ.ಬಿ.ಎಸ್ ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಚಿಕ್ಕಮಗಳೂರಿನಲ್ಲಿ ಮಾತನಾಡಿದ ಅವರು, ಖಾಲಿ ಇದ್ದ ವೈದ್ಯರ ಭರ್ತಿಗೆ ಸಂಬಂಧಿಸಿದ ತೊಡಕುಗಳನ್ನು ನಿವಾರಣೆ ಮಾಡಿ ನೇಮಕ ಮಾಡಿಕೊಳ್ಳಲಾಗಿದೆ. ಹಾಗೆ ರಾಜ್ಯದ ಅಸ್ಪತ್ರೆಗಳಿಗೆ ಅಗತ್ಯ ಇರುವ ಕಡೆ ವೈದ್ಯಕೀಯ ಉಪಕರಣಗಳ ಪೂರೈಕೆಗೆ ಅಗತ್ಯ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು. ಶೃಂಗೇರಿ ಬಳಿಯ ಬೆಳ್ಳಂದೂರಿನಲ್ಲಿ 100 ಹಾಸಿಗೆ ಸಾಮರ್ಥ್ಯದ ಸುಸಜ್ಜಿತ ಸರ್ಕಾರಿ ಆಸ್ಪತ್ರೆ ನಿರ್ಮಾಣ ಮಾಡಲಾಗುವುದು. ಆದಷ್ಟು ಶೀಘ್ರ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು.

*******

ಚಾಮರಾಜನಗರ ಕೃಷಿ ಮಹಾವಿದ್ಯಾಲಯದಲ್ಲಿ ಬಾಲಕರು ಮತ್ತು ಬಾಲಕಿಯರ ವಸತಿ ನಿಲಯ ಹಾಗೂ ಗ್ರಂಥಾಲಯದ ನೂತನ ಕಟ್ಟಡಗಳನ್ನು ತಾಲೂಕಿನ ಯಡಬೆಟ್ಟದಲ್ಲಿರುವ ಕೃಷಿ ಮಹಾವಿದ್ಯಾಲಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಹೆಚ್ಚು ಹಿಂದುಳಿದ ವರ್ಗದ ಜನರು ವಾಸಿಸುತ್ತಿರುವುದರಿಂದ ಈ ಭಾಗದ ಅಭಿವೃದ್ಧಿಗೆ ಪೂರಕವಾಗಿ ಸರ್ಕಾರ ನಬಾರ್ಡ್ ಸಹಯೋಗದಲ್ಲಿ ಕೃಷಿ ಕಾಲೇಜು ಮಂಜೂರು ಮಾಡಿದೆ.

ಇದರ ಭಾಗವಾಗಿ 40 ಕೋಟಿ ರೂಪಾಯಿ ವೆಚ್ಚದಲ್ಲಿ ಬಾಲಕರು ಮತ್ತು ಬಾಲಕಿಯರ ವಸತಿ ನಿಲಯ ಹಾಗೂ ಗ್ರಂಥಾಲಯದ ನೂತನ ಕಟ್ಟಡಗಳನ್ನು ನಿರ್ಮಿಸಲಾಗಿದ್ದು, ಇದರಿಂದ ಈ ಭಾಗದ ವಿದ್ಯಾರ್ಥಿಗಳಿಗೆ ಹಾಗೂ ರೈತರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

*******

ಹಾಸನದ ಹಾಸನಾಂಬ ದೇವಿ ಜಾತ್ರಾ ಮಹೋತ್ಸವ ಯಶಸ್ವಿಗೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಮುಜರಾಯಿ ಇಲಾಖೆ ಸಚಿವ ರಾಮಲಿಂಗರೆಡ್ಡಿ ಹೇಳಿದ್ದಾರೆ. ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವ ್ಷದಿಂದ ವ ್ಷಕ್ಕೆ ದೇವಿಯ ದರ್ಶನಕ್ಕೆ ಆಮಿಸುವ ಭಕ್ತಾದಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಈ ಬಾರಿಯೂ ಕಳೆದ ಬಾರಿಗಿಂತ ಹೆಚ್ಚು ಭಕ್ತರು ಆಗಮಿಸುವ ನಿರೀಕ್ಷೆ ಇದೆ ಎಂದರು. 80 ವ ್ಷಕ್ಕಿಂತ ಮೇಲ್ಪಟ್ಟವರು ಹಾಗೂ ವಿಶೇ ್ಷ ಚೇತನರಿಗೆ ನೇರ ದರ್ಶನ ವ್ಯವಸ್ಥೆ ಮಾಡಲಾಗಿದ್ದು, ಗಂಟೆಗೆ 6000 ಮಂದಿಯಂತೆ ಪ್ರತಿ ದಿನ ಒಂದು ಲಕ್ಷಕ್ಕೂ ಹೆಚ್ಚು ಭಕ್ತರು ದೇವಿಯ ದರ್ಶನ ಪಡೆಯಲು ಅನುಕೂಲವಾಗುವಂತೆ ಅಗತ್ಯ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

*******

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 38 ಕಡೆ ಆಯು ್ಮಾನ್ ಭಾರತ್– ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಒಟ್ಟು 24.70 ಕೋಟಿ ರೂಪಾಯಿ ಅನುದಾನ ಮಂಜೂರಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಪಿಎಂ–ಎಬಿಐಎಂ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಯ ಬಹುತೇಕ ಎಲ್ಲ ತಾಲೂಕುಗಳಿಗೂ ಹೊಸ ಆಯು ್ಮಾನ್ ಭಾರತ್– ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ ಸ್ಥಾಪನೆಗೆ ಅನುದಾನ ಮಂಜೂರು ಮಾಡಲಾಗಿದೆ. ಪ್ರತಿಯೊಂದು ಆಯು ್ಮಾನ್ ಭಾರತ್ ಹೆಲ್ತ್ ಸೆಂಟರ್ ಸ್ಥಾಪನೆಗೆ ತಲಾ 65 ಲಕ್ಷ ರೂಪಾಯಿ ಮಂಜೂರಾಗಿದ್ದು, ಅದರಡಿ ಸೂಕ್ತ ಕಟ್ಟಡ ಸೇರಿದಂತೆ ಅಗತ್ಯ ಮೂಲಸೌಕರ್ಯ ವ್ಯವಸ್ಥೆಗಳನ್ನು ಒದಗಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

*******

ಪಿಎಂ ಸೂರ್ಯಘರ್ ಯೋಜನೆಯಡಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳು 5.79 ಲಕ್ಷಕ್ಕೂ ಹೆಚ್ಚಿನ ಫಲಾನುಭವಿಗಳ ಸಾಲದ ಅರ್ಜಿಗಳನ್ನು ಮಂಜೂರು ಮಾಡಿವೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. 2025 ರ ಸೆಪ್ಟೆಂಬರ್ ವೇಳೆಗೆ ಒಟ್ಟಾರೆ 10,907 ಕೋಟಿ ರೂಪಾಯಿಗಳ ಸಾಲ ಸೌಲಭ್ಯದ ಮೂಲಕ ಮೇಲ್ಛಾವಣಿ ಸೌರ ವ್ಯವಸ್ಥೆ ಸ್ಥಾಪನೆಗೆ ಆರ್ಥಿಕ ಬೆಂಬಲ ನೀಡಿವೆ ಎಂದು ಹೇಳಿದ್ದಾರೆ. 2 ಲಕ್ಷವರೆಗೆ ಮೇಲಾಧಾರವಿಲ್ಲದೆ, ಸ್ಪರ್ಧಾತ್ಮಕ ಬಡ್ಡಿ ದರದಲ್ಲಿ ಸಾಲ ಒದಗಿಸಲಾಗುತ್ತಿದೆ. ಫಲಾನುಭವಿಗಳ ವಿದ್ಯುತ್ ವೆಚ್ಚ ಉಳಿತಾಯಕ್ಕೆ ಅನುಗುಣವಾಗಿ ಮರುಪಾವತಿಗೆ ದೀರ್ಘಾವಧಿ ಅವಕಾಶ ಕಲ್ಪಿಸಲಾಗಿದೆ. ಅರ್ಜಿದಾರರಿಂದ ಸ್ವಯಂ ಘೋ ್ಷಣೆ ಆಧಾರದ ಮೇಲೆ ಡಿಜಿಟಲ್ ಮಂಜೂರಾತಿ ಪ್ರಕ್ರಿಯೆ ಸೇರಿದಂತೆ ಪ್ರಮುಖ ಪ್ರಯೋಜನಗಳನ್ನು ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..
ಪ್ರಕಟಣೆ-32 ಸೆಕೆಂಡ್ಸ್
ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..
*******

'ಸ್ವಸ್ಥ ನಾರಿ, ಸಶಕ್ತ ಪರಿವಾರ' ಧ್ಯೇಯದೊಂದಿಗೆ, ರಾಜ್ಯಾದ್ಯಂತ ಪೋ ಇಣ ಮಾಸಾಚರಣೆ ಜಾರಿಯಲ್ಲಿದ್ದು, ಧಾರವಾಡ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳನ್ನು ಕೇಂದ್ರೀಕರಿಸಿ, ಅಪೌಷ್ಟಿಕ ಮಹಿಳೆಯರು, ಗರ್ಭಿಣಿಯರು ಹಾಗೂ ಮಕ್ಕಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ನಡೆಸಲಾಗುತ್ತಿದೆ.  ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಡಾ.ಹುಲಿಗೆಮ್ಮ ಕುಕನೂರ ಅವರು.

ಧ್ವನಿ-ಡಾ.ಹುಲಿಗೆಮ್ಮ ಕುಕನೂರ-40 ಸೆಕೆಂಡ್ಸ್
*******

ರಾಜ್ಯದ ವಿವಿಧೆಡೆ ನಿನ್ನೆ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಡಗರ, ಸಂಭ್ರಮದಿಂದ ಆಚರಿಸಿ, ಗೌರವ ಸಲ್ಲಿಸಲಾಯಿತು. ಜಯಂತಿ ಅಂಗವಾಗಿ ವಿಶೇ..ಷ ಉಪನ್ಯಾಸ, ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಮಹರ್ಷಿ ವಾಲ್ಮೀಕಿ ಭವನದಲ್ಲಿ  ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮ ನಡೆಯಿತು. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್.ಮುನಿಯಪ್ಪ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಯಾದಗಿರಿ ಮಹರ್ಷಿ ವಾಲ್ಮೀಕಿ ಭವನದಲ್ಲಿ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಉದ್ಘಾಟಿಸಿದರು. ರಾಯಚೂರಿನಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಸಂಸದ ಜಿ.ಕುಮಾರ ನಾಯ್ಕ ಚಾಲನೆ ನೀಡಿದರು. ಕೋಲಾರ ವಾಲ್ಮೀಕಿ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಶಾಸಕ ಕೊತ್ತುರು ಮಂಜುನಾಥ ಮಾತನಾಡಿ, ವಾಲ್ಮೀಕಿ ಸಮುದಾಯದ ಮಕ್ಕಳಿಗೆ ಹಾಸ್ಟೆಲ್ ಪ್ರಾರಂಭಿಸಲು 10 ಲಕ್ಷ ಅನುದಾನ ನೀಡಲಾಗುವುದು ಎಂದರು.

*******

ಅತಿಯಾದ ಮಳೆಯಿಂದ ಧಾರವಾಡ ಜಿಲ್ಲೆಯಲ್ಲಿ ಉಂಟಾದ ಬೆಳೆಹಾನಿಗೆ ಸಂಬಂಧಿಸಿದಂತೆ. ಪರಿಹಾರ ಪಾವತಿಸುವ ಕುರಿತು ಜಂಟಿ ಸಮೀಕ್ಷೆ ನಡೆಸಲಾಗಿದೆ. ಈ ಕುರಿತು ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಸಮೀಕ್ಷಾ ವರದಿಯನ್ನು ಅಂತಿಮಗೊಳಿಸಲಾಗಿದ್ದು, ತಾಲ್ಲೂಕುವಾರು ಬೆಳೆಹಾನಿ ಕ್ಷೇತ್ರದ ವಿವರಗಳನ್ನು ಭೂಮಿ ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲಾಗಿದೆ ಎಂದು ಪ್ರಭಾರ ಜಿಲ್ಲಾಧಿಕಾರಿ ಭುವನೇಶ ಪಾಟೀಲ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯದಲ್ಲಿ ನಡೆಯುತ್ತಿರುವ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆ: ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರದ ಸೂಚನೆ.

'ಜಲ ಸಂಚಯ, ಜನ ಭಾಗಿದಾರಿ' ಅಭಿಯಾನದಡಿ, ಜಲ ಸಂರಕ್ಷಣೆಯಲ್ಲಿ ತೊಡಗಿಸಿಕೊಂಡ ರಾಜ್ಯದ 7 ಜಿಲ್ಲೆಗಳು ರಾಷ್ಟ್ರೀಯ ಪ್ರಶಸ್ತಿಗೆ ಭಾಜನ.

ಪಿಎಂ ಸೂರ್ಯಘರ್ ಯೋಜನೆಯಡಿ 5.79 ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಸಾಲ ಸೌಲಭ್ಯ : ಕೇಂದ್ರ ಸಚಿವ ಪ್ರಲ್ಹಾದ ಜೋಶಿ

ರಾಜ್ಯದ ವಿವಿಧೆಡೆ ನಿನ್ನೆ ಸಡಗರ, ಸಂಭ್ರಮದಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********